ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ 57)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ. 637/2025

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಅಶೋಕ್** | | |
| **ತಂದೆ:ಹೆಸರು** | **ರಾಮಣ್ಣ** | **ಪಿಡಬ್ಲೂ:** | **04** |
| **ವಯಸ್ಸು** | **42 ವರ್ಷ** | **ಸಿಡಬ್ಲೂ:** | **07** |
| **ಉದ್ಯೋಗ:** | **ಅಡಿಗೆ ಕೆಲಸ** | | |
| **ವಾಸ ಸ್ಥಳ:** | **ಸಿಂಧನೂರು.** | | |

**ದಿನಾಂಕ 12-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ ಸ ಅ ರವರಿಂದ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು:: ಮಾನ್ಯ ಸ ಸ ಅ ರವರಿಂದ:**

ದಿ:21-12-2024 ರಂದು ಮ. 1 ಗಂಟೆಯ ಸುಮಾರಿಗೆ ನಾನು ಅರಗಿನ ಮರ ಕ್ಯಾಂಪಿನ ಲಕ್ಷ್ಮೀ ಗಣಪತಿ ಹೋಟೆಲ್‌ಗೆ ಕೆಲಸಕ್ಕೆಂದು ಹೋಗುತ್ತಿದ್ದಾಗ, ಮೃತಳನ್ನು ಚಾಸಾ-6 ತನ್ನ ವಾಹನ ಸಂ. ಕೆ ಎ 36 ಇ ಹೆಚ್ 1721 ರಲ್ಲಿ ಕೂರಿಸಿಕೊಂಡು ಸಿಂಧನೂರು ಕಡೆಯಿಂದ ರಾಯಚೂರು ಕಡೆಗೆ ರಸ್ತೆಯ ಎಡಗಡೆ ನಿಧಾನವಾಗಿ ಹೋಗುತ್ತಿದ್ದಾಗ, ಆರೋಪಿಯು ತನ್ನ ಲಾರಿ ಸಂ.ಕೆ ಎ 01/ಕೆ ಹೆಚ್ 5875 ನ್ನು ಸಿಂಧನೂರು ಕಡೆಯಿಂದ ರಾಯಚೂರು ಕಡೆಗೆ ಅತೀವೇಗ & ಅಲಕ್ಷತನದಿಂದ ನಡೆಸಿಕೊಂಡು ಬಂದು, ಚಾಸಾ-6 ರವರು ಚಲಾಯಿಸುತ್ತಿದ್ದ ವಾಹನಕ್ಕೆ ಟಕ್ಕರ್ ಕೊಟ್ಟು ಅಪಘಾತ ಪಡಿಸಿದ್ದರಿಂದ ಹಿಂದೆ

ಕುಳಿತಿದ್ದ ಮಹಿಳೆ ಅಪಘಾತದಲ್ಲಿ ಗಾಯಗೊಂಡು ಸ್ಥಳದಲ್ಲಿಯೇ ಮೃತಪಟ್ಟಿದ್ದಳು ಎಂದರೆ ಸರಿಯಲ್ಲ. ಚಾಸಾ-6 ರವರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದವು ಎಂದರೆ ಸರಿಯಲ್ಲ. ಸದರಿ ಅಪಘಾತ ಆರೋಪಿಯ ತಪ್ಪಿನಿಂದಲೇ ಆಗಿತ್ತು ಎಂದರೆ ಸರಿಯಲ್ಲ.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುವುದಿಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**